ಕರ್ನಾಟಕ ಸರ್ಕಾರ

ವಾಣಿಜ್ಯ ತೆರಿಗೆ ಇಲಾಖೆ

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ಉಪಸ್ಥಿತರು: ಶ್ರೀ ರಿತ್ವಿಕ್ ಪಾಂಡೆ, ಭಾ.ಆ.ಸೇ.
**ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು.**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿ 'ಬ್ರೈಡೆಡ್ ಕಾರ್ಡ್ (Braided Cord) ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಸುಪ್ರೀಮ್ ಟೆಕ್ಸ್‌ಟೈಲ್ಸ್, ಸಂಖ್ಯೆ: 88/4, ಕುಪ್ಪೇಂದ್ರ ರೆಡ್ಡಿ ಇಂಡಸ್ಟ್ರಿಯಲ್ ಲೇಔಟ್, ಸಿಂಗಸಂದ್ರ, ಹೊಸೂರು ರಸ್ತೆ, ಬೆಂಗಳೂರು-560068 ಇವರ ದಿನಾಂಕ 27-04-2015ರ ಅರ್ಜಿ. (ಟಿನ್: 29940473340).

****

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮಡಿಯಲ್ಲಿ ನೋಂದಣಿದಾರರಾದ ಮೆ: ಸುಪ್ರೀಮ್ ಟೆಕ್ಸ್‌ಟೈಲ್ಸ್, ಸಂಖ್ಯೆ: 88/4, ಕುಪ್ಪೇಂದ್ರ ರೆಡ್ಡಿ ಇಂಡಸ್ಟ್ರಿಯಲ್ ಲೇಔಟ್, ಸಿಂಗಸಂದ್ರ, ಹೊಸೂರು ರಸ್ತೆ, ಬೆಂಗಳೂರು-560068 ಇವರು ಮೇಲ್ಕಂಡ ಅರ್ಜಿಯಲ್ಲಿ 'ಬ್ರೈಡೆಡ್ ಕಾರ್ಡ್ (Braided Cord)' ಮೇಲೆ ಅನ್ವಯವಾಗುವ ತೆರಿಗೆ ದರದ ಬಗ್ಗೆ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

. . . 2)

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆಸಿಎಲ್ಆರ್/ಸಿಆರ್.17/2015-16, ದಿ. 14-07-2015**

ಅನುಸೂಚಿತವಲ್ಲದ ಸರಕಾದ 'ಬ್ರೈಡೆಡ್ ಕಾರ್ಡ್ (Braided Cord)' 2003ರ ಕಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯ ಪ್ರಕರಣ 4(1)(ಬಿ)(iii) ಅನ್ವಯ ಶೇ.14.5 ರಷ್ಟು ತೆರಿಗೆ ಬಾಧ್ಯತೆಗೊಳಪಡುತ್ತದೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

(ರಿತ್ವಿಕ್ ಪಾಂಡೆ),
**ವಾಣಿಜ್ಯ ತೆರಿಗೆಗಳ ಆಯುಕ್ತರು,**
(ಕರ್ನಾಟಕ), ಬೆಂಗಳೂರು.

ವಾಣಿಜ್ಯ ತೆರಿಗೆಗಳ ಆಯುಕ್ತರು
ಕರ್ನಾಟಕ, ಬೆಂಗಳೂರು